
## ರೋಗದ ಲಕ್ಷಣಗಳು

ಸಾಮಾನ್ಯವಾಗಿ ದೇಹಕ್ಕೆ ಗಾಯವಾದಾಗ 3 ರಿಂದ 8 ನಿಮಿಷಗಳಲ್ಲಿ ರಕ್ತ ಹೆಪ್ಪುಗಟ್ಟಿ ರಕ್ತ ಸೋರುವಿಕೆಯನ್ನು ತಡೆಯುತ್ತದೆ. ಆದರೆ ಕುಸುಮ ರೋಗದಿಂದ ಬಳಲುತ್ತಿರುವವರಲ್ಲಿ ರಕ್ತ ಹೆಪ್ಪುಗಟ್ಟುವುದೇ ಇಲ್ಲ. ಇದೇ ರೀತಿ ಆತಂರಿಕವಾಗಿ ಮೆದುಳಿನೊಳಗೆ, ಗಂಟಿನ ಒಳಗೆ ರಕ್ತಸ್ರಾವವಾಗಿ, ಅಂಗ ವೈಫಲ್ಯ ಮತ್ತು ಜೀವಹಾನಿ ಸಂಭವಿಸಲೂ ಬಹುದು. ಸ್ನಾಯುಗಳ ಒಳಗೆ ರಕ್ತಸ್ರಾವವಾದಲ್ಲಿ ಚಲನೆಗೆ ತೊಂದರೆಯಾಗಬಹುದು. ರಕ್ತ ಹೆಪ್ಪುಗಟ್ಟಿ ಗಡ್ಡೆಯಂತಾಗಿ ಶಾಶ್ವತ ಅಂಗ ವೈಫಲ್ಯಕ್ಕೆ ನಾಂದಿ ಹಾಡಬಹುದು. ರಕ್ತ ಹೆಪ್ಪುಗಟ್ಟುವ ಅಂಶಗಳ ಅಲಭ್ಯತೆಯ ಪ್ರಮಾಣವನ್ನು ಅನುಸರಿಸಿ ಕುಸುಮ ರೋಗವನ್ನು ಸೌಮ್ಯ, ಸಾಧಾರಣ ಮತ್ತು ತೀವ್ರತರ ಕುಸುಮ ರೋಗವೆಂದು ವಿಂಗಡಿಸಲಾಗುತ್ತದೆ. ತೀವ್ರತರ ಕುಸುಮ ರೋಗದಲ್ಲಿ ಒಮ್ಮಿಂದೊಮ್ಮೆಲೇ ಕೀಲುಗಳಲ್ಲಿ, ಸ್ನಾಯಗಳಲ್ಲಿ, ಮೆದುಳಿನೊಳಗೆ ರಕ್ತಸ್ರಾವವಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ. ಸಣ್ಣ ಪುಟ್ಟ ಗಾಯಗಳಿಂದಲೂ ತೀವ್ರತರವಾದ ರಕ್ತಸ್ರಾವ ವಾಗಿ ರಕ್ತದೊತ್ತಡ ಕಡಿಮೆಯಾಗಿ ಪ್ರಾಣಾಪಾಯವಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ.

ಆದರೆ ಸೌಮ್ಯ ತರದ ಕುಸುಮ ರೋಗದಲ್ಲಿ ಹೆಚ್ಚಿನ ಹಾನಿಯಾಗುವ ಸಾಧ್ಯತೆ ಕಡಿಮೆ. ತೀವ್ರತರ ಕುಸುಮ ರೋಗದಲ್ಲಿ ಮಂಡಿ, ಮೊಣಕೈ, ಹಿಮ್ಮಡಿಗಳಲ್ಲಿ ಒಮ್ಮಿಂದೊಮ್ಮೆಲೆ ರಕ್ತಸ್ರಾವವಾಗಬಹುದು. ಕಾಲಿನ ಮೀನ ಖಂಡಗಳಲ್ಲಿ, ತೊಡೆ ಸ್ನಾಯುನಲ್ಲಿ, ಆಂತರಿಕವಾಗಿ ರಕ್ತಸ್ರಾವವಾಗಿ ರಕ್ತ



ಗಂಟನ್ನು ಉಂಟು ಮಾಡುವ ಸಾಧ್ಯತೆ ಇರುತ್ತದೆ. ಅದೇ ರೀತಿ ಹಲ್ಲು ಕಿತ್ತ ಬಳಿಕ ರಕ್ತ ಹೆಪ್ಪುಗಟ್ಟದೆ ತೀವ್ರ ರಕ್ತಸ್ರಾವವಾಗುವುದು, ವಸಡುಗಳಲ್ಲಿ ತನ್ನಿಂತಾನೇ ರಕ್ತ ಒಸರುವುದು, ಹಲ್ಲು ಶುಚಿಗೊಳಿಸಿದ ಬಳಿಕ ವಸಡಿನಲ್ಲಿ ರಕ್ತ ಜಿನುಗುವುದು ಸಾಮಾನ್ಯವಾಗಿ ಕಂಡು ಬರುತ್ತದೆ. ಸೂಕ್ತ ಮುಂಜಾಗರೂಕತೆ ವಹಿಸಲೇ ಬೇಕು.

## ರೋಗದ ತೀವ್ರತೆ ಹೇಗಿರುತ್ತದೆ?

ಆರೋಗ್ಯವಂತ ವ್ಯಕ್ತಿಗಳ ದೇಹದ ರಕ್ತದಲ್ಲಿ ಈ ರಕ್ತ ಹೆಪ್ಪುಗಟ್ಟುವ ಅಂಶ ಅಥವಾ ಘಟಕ ಶೇಕಡಾ 60ರಿಂದ 200ರ ಮಿತಿಯೊಳಗೆ ಇರುತ್ತದೆ. ಆದರೆ ಹಿಮೋಫಿಲಿಯಾ ರೋಗದಿಂದ ಬಳಲುತ್ತಿರುವವರಲ್ಲಿ ಈ ಅಂಶದ ಕೊರತೆ ಇರುತ್ತದೆ. ಈ ಘಟಕಗಳ ಕೊರತೆಯ ಆಧಾರದ ಮೇಲೆ ರೋಗವನ್ನು ಸೌಮ್ಯ, ಸಾಧಾರಣ ಮತ್ತು ತೀವ್ರ ಹಿಮೋಫಿಲಿಯಾ ಎಂದು ವಿಂಗಡಿಸುತ್ತಾರೆ.

ಸೌಮ್ಯ ಹಿಮೋಫಿಲಿಯ: ಈ ವ್ಯಕ್ತಿಗಳಲ್ಲಿ ಘಟಕ ಎಂಟರ ಪ್ರಮಾಣ ಶೇಕಡಾ 6ರಿಂದ 30ರಷ್ಟು ಇರುತ್ತದೆ. ಸಾಮಾನ್ಯವಾಗಿ ಈ ವ್ಯಕ್ತಿಗಳಲ್ಲಿ ರಕ್ತಸ್ರಾವ ವಾಗುವ ಸಾಧ್ಯತೆ ಕಡಿಮೆಯಿರುತ್ತದೆ. ಹೆಚ್ಚಿನ ಸಂದರ್ಭಗಳಲ್ಲಿ ರೋಗದ ಲಕ್ಷಣಗಳು ಗೋಚರಿಸುವುದೇ ಇಲ್ಲ. ಆದರೆ ಗಾಯಗಳಾದಾಗ, ಅಪಘಾತ ಗಳಾದಾಗ ರಕ್ತಸ್ರಾವ ನಿಲ್ಲುವುದಿಲ್ಲ. ರಕ್ತ ಹೆಪ್ಪುಗಟ್ಟುವ ಪ್ರಕ್ರಿಯೆ ಬಹಳ ನಿಧಾನವಾಗಿರುತ್ತದೆ. ರಕ್ತ ಪರೀಕ್ಷೆ ಮಾಡಿ, ಘಟಕ ಎಂಟರ ಪ್ರಮಾಣವನ್ನು ಪತ್ತೆ ಮಾಡಿ ರೋಗವನ್ನು ಗುರುತಿಸಲಾಗುತ್ತದೆ.

ಸಾಧಾರಣ ಹಿಮೋಫಿಲಿಯಾ: ಈ ರೋಗಿಗಳಲ್ಲಿ ಪ್ರೊಟೀನ್ ಘಟಕ ಎಂಟರ ಪ್ರಮಾಣ ಶೇಕಡಾ 2ರಿಂದ 5ರಷ್ಟು ಇರುತ್ತದೆ. ಈ ವ್ಯಕ್ತಿಗಳಿಗೆ ಏಟಾದಾಗ, ಹಲ್ಲು ಕೀಳಿಸಿದಾಗ, ಅಥವಾ ಆಪರೇಷನ್ ಮಾಡಿದಾಗ ರಕ್ತಸ್ರಾವ ನಿಲ್ಲುವುದೇ ಇಲ್ಲ. ಹಲ್ಲು ಶುಚಿಗೊಳಿಸಿದಾಗಲೂ ವಿಪರೀತ ರಕ್ತಸ್ರಾವ ವಾಗಬಹುದು. ಸಾಮಾನ್ಯ ಗಾಯಗಳಿಂದಲೂ ವಿಪರೀತ ರಕ್ತಸ್ರಾವ ವಾಗುತ್ತದೆ. ಆಂತರಿಕವಾಗಿಯೂ ರಕ್ತ ಸ್ರಾವವಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ.

ತೀವ್ರ ಹಿಮೋಫಿಲಿಯಾ : ಈ ರೋಗಿಗಳಲ್ಲಿ ಘಟಕ ಎಂಟರ ಪ್ರಮಾಣ ಶೇಕಡಾ 1ಕ್ಕಿಂತಲೂ ಕಡಿಮೆ ಇರುತ್ತದೆ. ಕಾರಣವಿಲ್ಲದೆ ತನ್ನಿಂತಾನೇ ಆಂತರಿಕ ರಕ್ತಸ್ರಾವವಾಗುವ ಎಲ್ಲ ಸಾಧ್ಯತೆಗಳೂ ಇದೆ. ಇಂತಹ ರೋಗಿಗಳಲ್ಲಿ ಅತ್ಯಂತ ಜಾಗರೂಕರಾಗಿರಬೇಕು ಮತ್ತು ಯಾವುದೇ ಕ್ಷಣದಲ್ಲಿ ಅವಘಡಗಳು ಸಂಭವಿಸುವ ಸಾಧ್ಯತೆ ಇರುತ್ತದೆ. ಚರ್ಮದೊಳಗೆ ಸಣ್ಣ ಗಾಯಗಳಿಂದಲೂ ರಕ್ತ ಸ್ರಾವವಾಗಿ ಕಂದು ಮಿಶ್ರಿತ ಮಚ್ಚೆಗಳು ಕಾಣಿಸಿಕೊಳ್ಳುತ್ತದೆ. ಸ್ನಾಯಗಳಲ್ಲಿ ಕೀಲುಗಳಲ್ಲಿ ಆಂತರಿಕ ರಕ್ತಸ್ರಾವವಾಗುವ ಎಲ್ಲ ಸಾಧ್ಯತೆಗಳು ಇರುತ್ತದೆ.

## ಚಿಕಿತ್ಸೆ ಹೇಗೆ?

ಆನುವಂಶಿಕ ರೋಗವಾಗಿರುವ ಕುಸುಮ ರೋಗವನ್ನು ಸಂಪೂರ್ಣವಾಗಿ ಗುಣಪಡಿಸಲಾಗದು. ಆದರೆ ತಾತ್ಕಾಲಿಕ ಶಮನ ಮಾಡಿ ರಕ್ತಸ್ರಾವವನ್ನು ಕಡಿಮೆ ಮಾಡಬಹುದು. ರಕ್ತಸ್ರಾವವಾದಾಗ, ರೋಗಿಯ ರಕ್ತದಲ್ಲಿ ಕೊರತೆಯಾಗಿರುವ ರಕ್ತ ಹೆಪ್ಪುಗಟ್ಟುವ ಪ್ರೊಟೀನ್ ಘಟಕ ಎಂಟು ನೀಡಿದಲ್ಲಿ ರಕ್ತ ಹೆಪ್ಪುಗಟ್ಟಿ ರಕ್ತಸ್ರಾವ ನಿಲ್ಲುತ್ತದೆ. ಈ ಪ್ರೊಟೀನ್‌ಗಳನ್ನು ರಕ್ತದಾನಿಗಳ ಪ್ಲಾಸ್ಮಾದಿಂದ ಬೇರ್ಪಡಿಸಿ, ನಿರ್ದಿಷ್ಟ ಹೆಪ್ಪುಗಟ್ಟುವ ಪ್ರೊಟೀನ್ ಘಟಕಗಳ ಚುಚ್ಚುಮದ್ದನ್ನು ಮತ್ತು ಜೈವಿಕ ತಂತ್ರಜ್ಞಾನದಿಂದ ತಯಾರಿಸಲ್ಪಟ್ಟ ರಿಕಾಂಬಿಟೆಂಟ್ ವಿಷರಹಿತ ಚುಚ್ಚುಮದ್ದನ್ನು ನೀಡಿ ರೋಗದ ತೀವ್ರತೆಯನ್ನು ಕಡಮೆ ಮಾಡಲಾಗುತ್ತದೆ. ಈ ಪ್ರೊಟೀನ್ ಘಟಕಗಳು ದುಬಾರಿ ಮತ್ತು ಎಲ್ಲೆಡೆ ಅಲಭ್ಯವಾದ ಕಾರಣ, ಭಾರತದಂತಹ ಬಡ ದೇಶಗಳಲ್ಲಿ ಈ ಪ್ರೊಟೀನ್ ಹೊಂದಿರುವ ಪ್ಲಾಸ್ಮಾ ಮತ್ತು ಕ್ರಯೋಪ್ರೆಸಿಪಿಟೇಟ್ ನೀಡಿ ರೋಗವನ್ನು ಹತೋಟಿಗೆ ತರಲಾಗುತ್ತದೆ. ಕುಸುಮ ರೋಗದ ಬಗ್ಗೆ ಮತ್ತಷ್ಟು ಜಾಗೃತಿ, ಅರಿವು ಮೂಡಿಸಿ ಮುಂಜಾಗರೂಕತೆ ಕ್ರಮಗಳನ್ನು ತಿಳಿ ಹೇಳಿ ರೋಗಿಗಳಿಗೆ ಮಾನಸಿಕ ಸ್ಥೈರ್ಯ ನೀಡಿ ಪುನಶ್ಚೇತನ ನೀಡುವುದು ಅತಿ ಅಗತ್ಯ.

ಈ ರೋಗಗಳಿಂದ ಬಳಲುತ್ತಿರುವ ರೋಗಿಗಳು ತಮ್ಮ ಜೀವನ ಶೈಲಿಯನ್ನು ಪರಿವರ್ತಿಸಿಕೊಂಡು, ಗಾಯಗಳಾಗದಂತೆ ಎಚ್ಚರಿಕೆ ವಹಿಸಬೇಕಾಗುತ್ತದೆ. ಸಾಮ್ಯ ಮತ್ತು ಸಾಧಾರಣ ಕುಸುಮ ರೋಗದವರು ಸೂಕ್ತ ಮುನ್ನೆಚ್ಚರಿಕೆ ವಹಿಸಿ ಆಂತರಿಕ ರಕ್ತಸ್ರಾವವಾಗದಂತೆ ಜೀವನಶೈಲಿಯನ್ನು ಬದಲಾಯಿಸಿಕೊಳ್ಳಬೇಕು.

## ಮುಂಜಾಗರೂಕತಾ ಕ್ರಮಗಳು ಏನು?

ಗಂಟು, ಕೀಲು ಸ್ನಾಯಗಳು ಮತ್ತು ಮಾಂಸಖಂಡಗಳಲ್ಲಿ ರಕ್ತಸ್ರಾವ ವಾಗುವ ಮುನ್ಸೂಚನೆ ದೊರೆತ ಕೂಡಲೇ, ಘಟಕ ಎಂಟರ ಪ್ರೊಟೀನ್ ಚುಚ್ಚುಮದ್ದನ್ನು ಪಡೆಯಬೇಕು.

ಮಾರಣಾಂತಿಕ ರಕ್ತಸ್ರಾವಗಳಾದ ಮೆದುಳು ಮತ್ತು ಹೊಟ್ಟೆಯೊಳಗಿನ ಆಂತರಿಕ ರಕ್ತ ಸ್ರಾವಗಳಿಗೆ ತಕ್ಷಣವೇ ಚುಚ್ಚುಮದ್ದು ನೀಡಬೇಕು, ಚಿಕಿತ್ಸೆ ತಡವಾದಲ್ಲಿ ಪ್ರಾಣಕ್ಕೆ ಕುತ್ತು ಬರಬಹುದು.

ದಂತ ಆರೋಗ್ಯಕ್ಕೆ ಹೆಚ್ಚಿನ ಕಾಳಜಿ ಮತ್ತು ಮುತುವರ್ಜಿ ವಹಿಸಬೇಕು ದಿನಕ್ಕೆರಡು ಬಾರಿ ಹಲ್ಲುಜ್ಜಿ ಹಲ್ಲು, ವಸಡು ಮತ್ತು ಬಾಯಿಯ ಆರೋಗ್ಯ ಕಾಪಾಡಿಕೊಳ್ಳಬೇಕು. ಇಲ್ಲವಾದಲ್ಲಿ ವಸಡುಗಳಲ್ಲಿ ರಕ್ತ ಜಿನುಗಬಹುದು ಮತ್ತು ಹಲ್ಲು ಹುಳುಕಾಗಬಹುದು. ಹಲ್ಲು ಕಿತ್ತ ಬಳಿಕವೂ ವಿಪರೀತ ರಕ್ತ ಸ್ರಾವವಾಗಿ ಪ್ರಾಣಕ್ಕೆ ಸಂಚಕಾರ ಬರಬಹುದು. 6 ತಿಂಗಳಿಗೊಮ್ಮೆ ದಂತ ವೈದ್ಯರ ಭೇಟಿ ಅತೀ ಅಗತ್ಯ.

(ಲೇಖಕರು ಮಂಜೇಶ್ವರದಲ್ಲಿ ವೈದ್ಯರು: ಸಂಪರ್ಕ– 9845135787)